**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 36 ಗ್ರಾನೀಸ(5) 2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16.12.2013

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮುಖ್ಯ ಇಂಜಿನಿಯರ್,
   ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ,
   ಗ್ರಾಮೀಣಾಭಿವೃದ್ಧಿ ಭವನ,
   ಆನಂದ್‌ರಾವ್ ವೃತ್ತ, ಬೆಂಗಳೂರು-560009.

2. ಕಾರ್ಯಪಾಲಕ ಅಭಿಯಂತರರು,
   ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳು,
   ಹಾಗೂ ಸಂಬಂಧಿಸಿದ ಪಂಚಾಯತ್ ರಾಜ್ ಇಂಜಿನಿಯರಿಂಗ್
   ಉಪವಿಭಾಗಗಳ **ಸಹಾಯಕ ಕಾರ್ಯಪಾಲಕ ಅಭಿಯಂತರರು,**
   **ಬಳ್ಳಾರಿ, ಚಿಕ್ಕಮಗಳೂರು, ದಾವಣಗೆರೆ, ಮೈಸೂರು, ಚಿತ್ರದುರ್ಗ, ಬೆಳಗಾಂ,**
   **ಕಾರವಾರ(ಉ.ಕ), ಶಿವಮೊಗ್ಗ ಮತ್ತು ಮಂಡ್ಯ.**

ಮಾನ್ಯರೆ,

ವಿಷಯ: ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ಅರಣ್ಯ ಇಲಾಖೆಯ ಸಹಮತಿ ಪಡೆಯುವ ಬಗ್ಗೆ

----

ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ಅರಣ್ಯ ಇಲಾಖೆಯಲ್ಲಿ ಅನುಮತಿಗಾಗಿ ಬಾಕಿಯಿರುವ ಪ್ರಕರಣಗಳ ಕುರಿತಂತೆ ಚರ್ಚಿಸುವ ಸಲುವಾಗಿ ನಿರ್ದೇಶಕರು(**SWSM**) ಹಾಗೂ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರು ದಿನಾಂಕ:16.12.2013ರಂದು ಪೂರ್ವಾಹ್ನ 10.30ಘಂಟೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸಭಾಂಗಣ ಕೊಠಡಿಯಲ್ಲಿ ಸಭೆ ಕರೆಯಲಾಗಿದ್ದು, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಸಚಿವಾಲಯದ ಉಪ ಕಾರ್ಯದರ್ಶಿ ಮಾತ್ರ ಹಾಜರಿರುತ್ತಾರೆ. ಮುಖ್ಯವಾಗಿ ಹಾಜರಾಗಿಬೇಕಾಗಿದ್ದ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಹಾಗೂ ಸಂಬಂಧಿಸಿದ ಹಿರಿಯ ಅಧಿಕಾರಿಗಳು ಸಹಿತ ಯಾರೂ ಸದರಿ ಸಭೆಗೆ ಹಾಜರಾಗದ ಕಾರಣ ಪುನಃ ದಿನಾಂಕ:19.12.2013ರಂದು ಪೂರ್ವಾಹ್ನ 11.00ಘಂಟೆಗೆ ಸಭೆ ಕರೆಯಲಾಗಿದೆ. ಆದ್ದರಿಂದ **MVS** ಯೋಜನೆಗಳಿಗೆ ಸಂಬಂಧಿಸಿದಂತೆ ಅರಣ್ಯ ಇಲಾಖೆಯೊಂದಿಗೆ ಸಹಮತಿಗಾಗಿ ಈ ಕುರಿತು ಮಾಡಿರುವ ಪತ್ರ ವ್ಯವಹಾರಗಳ ಕಡತದೊಂದಿಗೆ, ಮೇಲೆ(2)ರಲ್ಲಿ ವಿಳಾಸಿಸಿರುವ **PRED** ಇಂಜಿನಿಯರ್‌ಗಳು, **CE/PRED**ರವರು ಮತ್ತು **PRED** ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಬಂಧಿಸಿದ ಸಿಬ್ಬಂದಿಯೊಂದಿಗೆ ಸದರಿ ಸಭೆಯಲ್ಲಿ ಉಪಸ್ಥಿತರಿರುವಂತೆ ಕೋರಿದೆ.

ತಮ್ಮ ವಿಶ್ವಾಸಿ,

(ರಾಮಕೃಷ್ಣ) 16/12/13
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
**ಇಮೇಲ್:rk3452000@gmail.com**
**ಫೋನ್ ನಂ:22032806 ಫ್ಯಾಕ್ಸ್:22203175**

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
2. ನಿರ್ದೇಶಕರು(SWSM) ಮತ್ತು ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
3. ಪ್ರಭಾಷ್ ಚಂದ್ರ ರೇ, ವಿಶೇಷ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.